ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 5/6/2020

# ಗುಜರಾತ್‌ನ ಇಬ್ಬರು ಕೈ ಶಾಸಕರ ರಾಜೀನಾಮೆ

## ರಾಜ್ಯಸಭೆ ಚುನಾವಣೆ ಹೊಸ್ತಿಲಲ್ಲಿ ಆಘಾತ

**ಅಹಮದಾಬಾದ್:** ಗುಜರಾತ್‌ನಲ್ಲಿ ಪಕ್ಷದ ಇಬ್ಬರು ಶಾಸಕರು ಗುರುವಾರ ರಾಜೀನಾಮೆ ನೀಡುವುದರೊಂದಿಗೆ ರಾಜ್ಯ ಸಭೆ ಚುನಾವಣೆ ಹೊಸ್ತಿಲಲ್ಲಿ ಕಾಂಗ್ರೆಸ್ ಮತ್ತೊಂದು ಆಘಾತ ಅನುಭವಿಸಿದೆ.



ಶಾಸಕರಾದ ಅಕ್ಷಯ್ ಪಟೇಲ್ ಮತ್ತು ಜಿತು ಚೌಧರಿ ನೀಡಿರುವ ರಾಜೀನಾಮೆಯನ್ನು ಅಂಗೀಕರಿಸಿರುವುದಾಗಿ ಸ್ಪೀಕರ್ ರಾಜೇಂದ್ರ ತ್ರಿವೇದಿ ಪ್ರಕಟಿಸಿದ್ದಾರೆ. ರಾಜ್ಯ ಸಭೆ ಚುನಾವಣೆ ಹಿನ್ನೆಲೆಯಲ್ಲಿ ಆಡಳಿತಾರೂಢ ಬಿಜೆಪಿ ಆಪರೇಷನ್ ಕಮಲ ನಡೆಸಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. "ಶಾಸಕರ ರಾಜೀನಾಮೆಗೂ, ನಮಗೂ ಸಂಬಂಧವಿಲ್ಲ. ಆ ಪಕ್ಷದ ಶಾಸಕರು ನಾಯಕತ್ವದ ಬಗ್ಗೆ ಅಸಮಾಧಾನ ಹೊಂದಿ ರಾಜೀನಾಮೆ ನೀಡಿರಬಹುದು," ಎಂದು ಬಿಜೆಪಿ ಪ್ರತಿಕ್ರಿಯಿಸಿದೆ. ಕಳೆದ ಮಾರ್ಚ್‌ನಲ್ಲಿಯೂ ಕಾಂಗ್ರೆಸ್‌ನ ಐವರು ಶಾಸಕರು ರಾಜೀನಾಮೆ ನೀಡಿದ್ದರು.

ಜೂನ್ 19ರಂದು ನಡೆಯುವ ರಾಜ್ಯ ಸಭೆ ಚುನಾವಣೆಯಲ್ಲಿ ಗುಜರಾತ್‌ನಿಂದ ನಾಲ್ವರು ಸದಸ್ಯರನ್ನು ಆಯ್ಕೆ ಮಾಡಬೇಕಿದೆ. ನಿವೃತ್ತಿ ಹೊಂದಿರುವ ಸದಸ್ಯರಲ್ಲಿ ಮೂವರು ಬಿಜೆಪಿಯವರು. ಸಂಸತ್‌ನ ಮೇಲ್ಮನೆಯಲ್ಲಿ ಸಂಖ್ಯಾಬಲ ಹೆಚ್ಚಿಸಿಕೊಳ್ಳುವ ಅನಿವಾರ್ಯತೆಯಲ್ಲಿರುವ ಬಿಜೆಪಿಯು ಮೂರೂ ಸ್ಥಾನ ಉಳಿಸಿಕೊಳ್ಳಲು ಪಣ ತೊಟ್ಟಿದೆ. ಎರಡು ಸ್ಥಾನ ಗೆಲ್ಲಲೇಬೇಕು ಎನ್ನುವುದು ಕಾಂಗ್ರೆಸ್ ಛಲ. 182 ಸದಸ್ಯ ಬಲದ ವಿಧಾನಸಭೆಯಲ್ಲಿ ಬಿಜೆಪಿ 101, ಕಾಂಗ್ರೆಸ್ 66 ಸದಸ್ಯರನ್ನು ಹೊಂದಿವೆ. ಶಾಸಕರ ರಾಜೀನಾಮೆಯಿಂದ 7, ಚುನಾವಣಾ ತಕರಾರು ಅರ್ಜಿಯಿಂದ ಕಾರಣದಿಂದ 2 ಸ್ಥಾನಗಳು ಖಾಲಿ ಇವೆ. ಭಾರತೀಯ ಟ್ರೈಬಲ್ ಪಾರ್ಟಿಯ ಇಬ್ಬರು, ಎನ್‌ಸಿಪಿಯ ಒಬ್ಬರು ಹಾಗೂ ಒಬ್ಬ ಪಕ್ಷೇತರ (ಜಿಗ್ನೇಶ್ ಮೇವಾನಿ) ಶಾಸಕ ಇದ್ದಾರೆ.

ರಾಜ್ಯಸಭೆ ಚುನಾವಣೆಗೆ ಬಿಜೆಪಿಯು ಅಭಯ್ ಭಾರದ್ವಾಜ್, ರಮೀಳಾಬೆನ್ ಬಾರಾ ಮತ್ತು ನರಹರಿ ಅಮಿನ್ ಅವರನ್ನು ಕಣಕ್ಕೆ ಇಳಿಸಿದೆ. ಕಾಂಗ್ರೆಸ್ ಶಕ್ತಿಸಿನ್ಹಾ ಗೋಹಿಲ್ ಹಾಗೂ ಭರತ್‌ಸಿನ್ಹ ಸೋಳಂಕಿ ಅವರಿಗೆ ಟಿಕೆಟ್ ನೀಡಿದೆ. ಬಿಟಿಪಿ, ಎನ್‌ಸಿಪಿ, ಪಕ್ಷೇತರ ಶಾಸಕರ ಬೆಂಬಲದಿಂದ ಎರಡು ಸ್ಥಾನ ಗೆಲ್ಲುವ ವಿಶ್ವಾಸವನ್ನು ಕಾಂಗ್ರೆಸ್ ಹೊಂದಿತ್ತು. ಈಗ ಇಬ್ಬರು ಶಾಸಕರ ರಾಜೀನಾಮೆಯೊಂದಿಗೆ ಎರಡನೇ ಸ್ಥಾನ ಗೆಲ್ಲುವ ಸಾಧ್ಯತೆ ಕ್ಷೀಣಿಸಿದೆ.